ಏ.21 ರಂದು ಭಗವಾನ ಮಹಾವೀರ ಜನ್ಮ ಕಲ್ಯಾಣಕ ಮಹೋತ್ಸವ ಆಚರಣೆ

ಬೆಳಗಾವಿ.ಏ.12: ಪ್ರತಿ ವರ್ಷದಂತೆ ಈ ವರ್ಷವೂ ಸಹ ಭಗವಾನ ಮಹಾವೀರ ಜನ್ಮ ಕಲ್ಯಾಣಕ ಮಹೋತ್ಸವವನ್ನು ಏಪ್ರಿಲ 21 ರಂದು ಅದ್ದೂರಿಯಾಗಿ ಆಚರಿಸಲಾಗುವುದು ಎಂದು ಶ್ರೀ. ಭಗವಾನ ಮಹಾವೀರ ಜನ್ಮ ಕಲ್ಯಾಣಕ ಮಹೋತ್ಸವ ಮಧ್ಯವರ್ತಿ ಉತ್ಸವ ಸಮಿತಿ ಗೌರವ ಕಾರ್ಯದರ್ಶಿ ರಾಜೇಂದ್ರ ಜೈನ ಅವರು ಇಂದಿಲ್ಲಿ ಹೇಳಿದರು.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ 25 ವರ್ಷಗಳಿಂದ ಬೆಳಗಾವಿಯಲ್ಲಿ ದಿಗಂಬರ ಮತ್ತು ಶ್ವೇತಾಂಬರ ಜೈನ ಸಮಾಜದವರು ಒಂದಾಗಿ ಮಹಾವೀರ ಜನ್ಮ ಕಲ್ಯಾಣಕ ಮಹೋತ್ಸವವನ್ನು ಆಚರಿಸುತ್ತ ಬಂದಿದ್ದಾರೆ. 25 ವರ್ಷಗಳ ಹಿಂದೆ ಅಂದಿನ ಆದಾಯ ತೆರಿಗೆ ಆಯುಕ್ತರಾದ ನರೇಂದ್ರ ಜೈನ ಅವರ ಮಾರ್ಗದರ್ಶನದಲ್ಲಿ ಈಉತ್ಸವ ಆರಂಭವಾಯಿತು. ಅಂದಿನಿಂದ ಇಂದಿನವರೆಗೆ ಉತ್ಸವ ನಿರಂತರವಾಗಿ ನಡೆದುಕೊಂಡು ಬಂದಿದೆ ಎಂದು ಅವರು ತಿಳಿಸಿದರು.

ಜನ್ಮ ಕಲ್ಯಾಣಕ ಮಹೋತ್ಸವದ ಅಂಗವಾಗಿ ಬೆಳಗಾವಿಯಲ್ಲಿ ವಿವಿಧ ಸಾಂಸ್ಕೃತಿಕ ಮತ್ತು ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸೋಮವಾರ ಏ.15 ರಂದು ಬೆಳಿಗ್ಗೆ 9 ಗಂಟೆಗೆ ಭರತೇಶ ಶಿಕ್ಷಣ ಸಂಸ್ಥೆಯಲ್ಲಿ ಭೃಹತ್ತ ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ಮಂಗಳವಾರ ಏ.16 ರಂದು ಮಹಾವೀರ ಭವನದಲ್ಲಿ ಬೆಳಿಗ್ಗೆ 10 ರಿಂದ ಮಧಾಹ್ನ 1 ಗಂಟೆಯವರೆಗೆ ಅರ್ಹಂ ವಿಜ್ಞಾ ಅಹಮದನಗರ ಅವರಿಂದ ಜೀವನ ಶೈಲಿ ಕುರಿತು ತರಬೇತಿ ಕಾರ್ಯಾಗಾರ ಸಾಯಂಕಾಲ 4 ಗಂಟೆಗೆ ಚಿತ್ರಕಲಾ ಸ್ಪರ್ಧೆ ಕಾರ್ಯಕ್ರಮಗಳು ನಡೆಯಲಿವೆ ಎಂದು ಅವರು ಹೇಳಿದರು.

ಬುಧವಾರ ಏ.17 ರಂದು ಬೆಳಿಗ್ಗೆ 10 ಗಂಟೆಯಿಂದ ರಾತ್ರಿ 8 ಗಂಟೆಯವರೆಗೆ ಮಹಾವೀರ ಭವನದಲ್ಲಿ ವಸ್ತು ಪ್ರದರ್ಶನ , ಉದ್ಯೋಗಸ್ತ ಮಹಿಳೆಯರಿಗಾಗಿ ವ್ಯಾಪಾರ ಮಳಿಗೆ ಮತ್ತು ಸ್ಪರ್ಧೆ ಏರ್ಪಡಿಸಲಾಗಿದೆ.

ಅಂದು ಸಾಯಂಕಾಲ ಮಹಿಳೆಯರಿಗಾಗಿ ಗುಂಪು ಭಜನೆ , ಕಲರ್ಸ ಆಫ್ ಇಂಡಿಯಾ ಗ್ರುಪ್ ನೃತ್ಯ, ಪಾಕಕಲಾ ಸ್ಪರ್ಧೆ, ಸೀರೆ ವಿನ್ಯಾಸಗಳ ಸ್ಪರ್ಧೆ, ಮಕ್ಕಳಿಗಾಗಿ ಕಸದಿಂದ ರಸ ಸ್ಪರ್ಧೆ, ಸೂಪರ ಹೀರೋ ಸ್ಪರ್ಧೆಗಳು ನಡೆಯಲಿವೆ ಎಂದು ಅವರು ಹೇಳಿದರು.

ಗುರುವಾರ ಏ.18 ರಂದು ಸಾಯಂಕಾಲ 6 ಗಂಟೆಯಿಂದ 9 ಗಂಟೆಯವರೆಗೆ ಮಕ್ಕಳ ಜಿನ ಭಜನಾ ಸ್ಪರ್ಧೆ, ಮಹಿಳೆಯರಿಗೆ ನೃತ್ಯ ಸ್ಪರ್ಧೆ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮಗಳು ನಡೆಯಲಿವೆ. ಶುಕ್ರವಾರ ಏ. 19 ರಂದು ಸಾಯಂಕಾಲ 6 ರಿಂದ 9 ಗಂಟೆಯವರೆಗೆ " ಬ್ರಾಹ್ಮಿ ಇಂದ ಗೊಮ್ಮಟನವರೆಗೆ " ನಾಟಕ ನಡೆಯಲಿದೆ ಎಂದು ಅವರು ತಿಳಿಸಿದರು.

ಏ. 21 ರವಿವಾರದಂದು ಶೋಭಾಯಾತ್ರೆ ನಡೆಯಲಿದೆ. ಅಂದು ಬೆಳಿಗ್ಗೆ 8 ಘಂಟೆಗೆ ಜೈನ ಯುವ ಸಂಘಟನೆ ವತಿಯಿಂದ ಬೃಹತ್ ಬೈಕ ರ್‍ಯಾಲಿ ನಡೆಸಲಾಗುವುದು.

ಸಮಾರಂಭಕ್ಕೆ ಮುಖ್ಯ ಅತಿಥಿಯಾಗಿ ರಾಣಿ ಚೆನ್ನಮ್ಮ ವಿಶ್ವ ವಿದ್ಯಾಲಯದ ಉಪ ಕುಪಲತಿ ಪ್ರೋ.ಸಿ.ಎಂ.ತ್ಯಾಗರಾಜ ಗೌರವ ಅತಿಥಿಯಾಗಿ ಪದ್ಮಶ್ರೀ ಪ್ರೋ. ಡಾ&ರಣ; ಮದನ ಗೋಡಬೊಲೆ ಇವರು ಆಗಮಿಸಲಿದ್ದಾರೆ. ಸಮಾದೇವಿ ಗಲ್ಲಿ ಖಡೆಬಜಾರದಿಂದ ಶೋಭಾಯಾತ್ರೆಗೆ ಚಾಲನೆ ನೀಡಲಾಗುವುದು. ಶೋಭಾ ಯಾತ್ರೆ ರಾಮದೇವ ಗಲ್ಲಿ, ರಾಮಲಿಂಗಖಿಂಡ ಗಲ್ಲಿ, ಟಿಳಕಚೌಕ, ಶೇರಿ ಗಲ್ಲಿ, ಶನಿ ಮಂದಿರ, ಎಸ್.ಪಿ.ಎಂ.ರೋಡ, ಕೋರೆ ಗಲ್ಲಿ ಶಹಾಪೂರ, ಹಾಗೂ ಬಸವೇಶ್ವರ ವೃತ್ತದ ಮುಖಾಂತರ ಮಹಾವೀರ ಭವನ ತಲುಪಿ ಶೋಭಾಯಾತ್ರೆ ಮುಕ್ತಾಯಗೊಳ್ಳುವುದು. ,ಮಹಾವೀರ ಭವನದಲ್ಲಿ ಎಲ್ಲ ಭಕ್ತಾದಿಗಳಿಗೆ ಪ್ರಸಾದ ವ್ಯವಸ್ಥೆ ಮಾಡಲಾಗುವುತ್ತದೆ ಎಂದು ಅವರು ತಿಳಿಸಿದರು.

ಪತ್ರಿಕಾಗೋಷ್ಟಿಯಲ್ಲಿ ವಿನೋದ ದೊಡ್ಡಣ್ಣವರ, ರಾಜೇಂದ್ರ ಜಕ್ಕನ್ನವರ, ರಾಜು ಖೋಡಾ, ಸಾಗರ ಬೋರಗಲ್ಲ ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

ಮಕ್ಕಳಿಗೆ ಚಿತ್ರಕಲೆ ಸ್ಪರ್ಧೆ

ಕೊಪ್ಪಳ: ಜಿಲ್ಲೆಯ ಬೇವಿನಹಳ್ಳಿ ಗ್ರಾಮ ಪಂಚಾಯಿತಿಗೆ ಒಳಪಡುವ ಶಹಪುರ ಗ್ರಾಮದ ಶ್ರೀ ವಿಠ್ಠಲ ರುಕ್ಮಿಣಿ ಮಂದಿರದಲ್ಲಿ ಮಕ್ಕಳಿಗೆ ಚಿತ್ರಕಲಾ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು.

ಗೋಂಧಳಿ ಸಮಾಜದ ಯುವಕರ ಸಂಘದಿಂದ ಆಯೋಜಿಸಿದ್ದ ಈ ಚಿತ್ರಕಲಾ ಸ್ಪರ್ಧೆಯಲ್ಲಿ ಪುಟ್ಟ ಪುಟ್ಟ ಮಕ್ಕಳು ಭಾಗವಹಿಸಿದ್ದರು. ಪೋಷಕರು ಮಕ್ಕಳಿಗೆ ಬೇಕಾದ ಪೇಪರ್, ಕಲರ್ ಪೆನ್ಸಲ್‌ಗಳನ್ನು ಒದಗಿಸಿದ್ದರು.

ಶಹಪುರ ಗ್ರಾಮದಲ್ಲಿ ಶ್ರೀ ಮಾರೆಮ್ಮ ದೇವಿ ಪ್ರಯುಕ್ತ ಗೋಂಧಳಿ ಸಮಾಜದ ಬಂಧುಗಳು ಆಗಮಿಸಿದ್ದು ಮಕ್ಕಳಿಗೆ ಚಿತ್ರಕಲೆ ಮತ್ತು ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸುವ ಮೂಲಕ ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಸ್ಪರ್ಧಾ ಮನೋಭಾವನೆಗಳನ್ನು ಮೂಡಿಸಿದರು.

ಈ ಚಿತ್ರಕಲಾ ಸ್ಪರ್ಧೆಯನ್ನು ಮಂಜು ಕೆ.ಜೋಷಿ, ಶಶಿ ವಾಷ್ಟರ್, ರಾಮ್ ಜೋಷಿ, ಮೇಘ ವಾಕೋಡೆ, ಪ್ರವೀಣ್ ವಾಕೋಡೆ, ಹನುಮಂತ ನಾಯ್ಕಲ್, ಕಿರಣ್ ವಾಷ್ಟರ್ ಮತ್ತಿತರರ ನೇತೃತ್ವದಲ್ಲಿ ಆಯೋಜಿಸಿದ್ದು, ಚಿಣ್ಣರು ಉತ್ಸಾಹದಿದ ಚಿತ್ರಕಲಾ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು.

ಕಾಂಗ್ರೆಸ್ ಪಕ್ಷದಿಂದ ಈ ತುಕಾರಾಂ ನಾಮಪತ್ರ ಸಲ್ಲಿಕೆ

ಬಳ್ಳಾರಿ ಏ 12. ಲೋಕಸಭಾ ಚುನಾವಣೆಯ ಉಮೇದುವಾರಿಕೆ ಸಲ್ಲಿಸಲು ಇಂದಿನಿಂದ ಆರಂಭವಾಗಿದ್ದು, ಬಿಜೆಪಿ-ಕಾಂಗ್ರೆಸ್ ಅಭ್ಯರ್ಥಿಗಳು ಪೈಪೋಟಿಗೆ ಬಿದ್ದವರಂತೆ ಬೃಹತ್ ಮೆರವಣಿಗೆಗಳ ಮೂಲಕ ಜಿಲ್ಲಾಧಿಕಾರಿಗಳ ಕಛೇರಿಗೆ ಬಂದು ಚುನಾವಣಾಧಿಕಾರಿಗಳಿಗೆ ತಮ್ಮ ನಾಮಪತ್ರಗಳನ್ನು ಸಲ್ಲಿಸಿದರು.

ಕಾಂಗ್ರೆಸ್ ಅಭ್ಯರ್ಥಿ ಸಂಡೂರಿನ ಶಾಸಕ ಇ.ತುಕಾರಾಂ ತಮ್ಮ ಉಮೇದುವಾರಿಕೆ ಸಲ್ಲಿಸುವ ಮುನ್ನ ನಗರದ ಅಧಿದೇವತೆ ಕನಕ ದುರ್ಗಮ್ಮ ದೇವಸ್ಥಾನಕ್ಕೆ ತೆರಳಿ ದೇವಿಯ ದರ್ಶನ ಪಡೆದ ತುಕಾರಾಂ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಚಿವರಾದ ಬಿ.ನಾಗೇಂದ್ರ, ಬಿ.ಝಡ್. ಜಮೀರ್ ಅಹ್ಮದ್ ಖಾನ್, ಅಲ್ಲಂ ವೀರಭದ್ರಪ್ಪ ಶಾಸಕರಾದ ನಾರಾ ಭರತ್ ರೆಡ್ಡಿ, ಜೆ.ಎನ್.ಗಣೇಶ್. ಭೀಮ ನಾಯಕ್ ಪಿಟಿ ಪರಮೇಶ್ವರ್ ನಾಯಕ್, ಅಲ್ಲಂ ಪ್ರಶಾಂತ್, ಡಾ.ಎನ್.ಟಿ.ಶ್ರೀನಿವಾಸ್, ಸೇರಿದಂತೆ ಮಹಾನಗರ ಪಾಲಿಕೆ ಸದಸ್ಯರು ಸಾಥ್ ನೀಡಿದರು.

ಕನಕ ದುರ್ಗಮ ದೇವಸ್ಥಾನದ ಆವರಣದಿಂದ ತೆರೆದ ವಾಹನದಲ್ಲಿ ಕಾಂಗ್ರೆಸ್ ಕಾರ್ಯಕರ್ತರೊಂದಿಗೆ ಕನಕ ದುರ್ಗಮ್ಮ ದೇವಸ್ಥಾನದಿಂದ ಮೆರವಣಿಗೆ ಹೊರಟು ಅಂಡರ್ ಬ್ರಿಡ್ಜ್ ಮೂಲಕ ಡಬಲ್ ರಸ್ತೆ ರಾಯಲ್ ವೃತ್ತೆ ಅಲ್ಲಿಂದ ಜಿಲ್ಲಾಧಿಕಾರಿಗಳ ಕಛೇರಿಗೆ ತೆರಳಿ ಜಿಲ್ಲಾ ಚುನಾವಣಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾರವರಿಗೆ ತಮ್ಮ ನಾಮಪತ್ರವನ್ನು ಸಲ್ಲಿಸಿದರು. ಇನ್ನು ಮೆರವಣಿಗೆಯ ಉದ್ದಗಲಕ್ಕೂ ಸೇರಿದ್ದ ಕಾಂಗ್ರೆಸ್ ಕಾರ್ಯಕರ್ತರು ಜೈಕಾರಗಳನ್ನು ಕೂಗುತ್ತಾ ಸಾಗಿದರು.

ಚುನಾವಣಾ ಜಾಹೀರಾತು-ಪೂರ್ವಾನುಮತಿ ಕಡ್ಡಾಯ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಯಾವುದೇ ಪಕ್ಷ ಅಥವಾ ಅಭ್ಯರ್ಥಿಗಳ ಪರವಾಗಿ ಜಾಹೀರಾತುಗಳನ್ನು ಪ್ರಕಟಿಸಿದ ಸಂದರ್ಭದಲ್ಲಿ ಆಯಾ ಮಾಧ್ಯಮಗಳಿಗೆ ನಗದಿಪಡಿಸಲಾದ ಜಾಹೀರಾತು ದರ ಅಥವಾ ಆಯಾ ಮಾಧ್ಯಮಗಳ ವಾಸ್ತವಿಕ ವಾಣಿಜ್ಯ ಜಾಹೀರಾತು ದರ ಪರಿಗಣಿಸಿ ಅದರ ಮೊತ್ತವನ್ನು ಪಕ್ಷ ಅಥವಾ ಅಭ್ಯರ್ಥಿಯ ಚುನಾವಣಾ ವೆಚ್ಚಕ್ಕೆ ಸೇರಿಸಲು ಚುನಾವಣಾ ವೆಚ್ಚ ವೀಕ್ಷಕರಿಗೆ ಸಮಿತಿಯು ಮಾಹಿತಿ ನೀಡಲಿದೆ.

ಅದೇ ರೀತಿಯಲ್ಲಿ ಯಾವುದೇ ಮಾಧ್ಯಮದಲ್ಲಿ ಪ್ರಸಾರವಾದ ಚುನಾವಣಾ ಜಾಹೀರಾತುಗಳಿಗೆ ಪೂರ್ವಾನುಮತಿ ಪಡೆಯಲಾಗಿದೆಯೇ ಎಂಬುದನ್ನು ಪರಿಶೀಲಿಸಲಾಗವುದು. ಅಭ್ಯರ್ಥಿಯ ಅಥವಾ ಪಕ್ಷದ ಒಪ್ಪಿಗೆಯಿಂದ ನೀಡಲಾಗಿರುವ ಜಾಹೀರಾತುಗಳ ವೆಚ್ಚವನ್ನು ಸಂಬಂಧಪಟ್ಟ ಪಕ್ಷ ಅಥವಾ ಅಭ್ಯರ್ಥಿಯ ವೆಚ್ಚಕ್ಕೆ ಸೇರಿಸಲಾಗುತ್ತದೆ.

ಮೀಡಿಯಾ ಮಾನಿಟರಿಂಗ್ ಸೆಲ್:

ಚುನಾವಣಾ ಜಾಹೀರಾತುಗಳ ಪರಿಶೀಲನೆ ಮತ್ತು ಪೂರ್ವಾನುಮತಿ(ಪ್ರಿಸರ್ಟಿಫಿಕೇಷನ್)ಗಾಗಿ "ವಾರ್ತಾಭವನ" ಉಪ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಕ ಸಂಪರ್ಕ ಇಲಾಖೆ, ನ್ಯಾಯಾಲಯ ಆವರಣ" (ದೂರವಾಣಿ ಸಂಖ್ಯೆ-9480841233) ಈ ಕಚೇರಿಯಲ್ಲಿ ಮೀಡಿಯಾ ಮಾನಿಟರಿಂಗ್ ಕೇಂದ್ರ ಸ್ಥಾಪಿಸಲಾಗಿರುತ್ತದೆ.

ಜಾಹೀರಾತುಗಳನ್ನು ಪ್ರಕಟ ಅಥವಾ ಪ್ರಸಾರ ಮಾಡಲು ಪೂರ್ವಾನುಮತಿ ಪಡೆಯಲು ಈ ಕೇಂದ್ರದಲ್ಲಿ ಅರ್ಜಿ ನಮೂನೆಗಳು ಲಭ್ಯವಾಗಿರುತ್ತವೆ. ಅಭ್ಯರ್ಥಿಗಳು ಅಥವಾ ರಾಜಕೀಯ ಪಕ್ಷಗಳು ಭರ್ತಿ ಮಾಡಿದ ಅರ್ಜಿ ಜತೆಗೆ ಜಾಹೀರಾತಿನ ಎರಡು ಸಿಡಿ ಹಾಗೂ ಹಸ್ತಪ್ರತಿ(ಸ್ಕ್ರಿಪ್ಟ್) ಸಲ್ಲಿಸಬೇಕು. ಜಿಲ್ಲಾ ಮಾಧ್ಯಮ ಪ್ರಮಾಣೀಕರಣ ಮತ್ತು ಕಣ್ಗಾವಲು(ಎಂಸಿಎಂಸಿ) ಸಮಿತಿಯು ಅರ್ಜಿಗಳನ್ನು ಪರಿಶೀಲಿಸಿ, ಪೂರ್ವಾನುಮತಿ ನೀಡಲಿದೆ. ಆದ್ದರಿಂದ ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ಜಾಹೀರಾತುಗಳನ್ನು ಪ್ರಕಟ ಅಥವಾ ಪ್ರಸಾರ ಮಾಡಲು ಕಡ್ಡಾಯವಾಗಿ ಪೂರ್ವಾನುಮತಿ ಪಡೆಯಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ನತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಹುಮತದಿಂದ ಕಾಂಗ್ರೆಸ್ ಗೆಲ್ಲಲಿದೆ-ನಾಗೇಂದ್ರ

ಬಳ್ಳಾರಿ ಏ 12. ಬಳ್ಳಾರಿ ಮತ್ತು ವಿಜಯನಗರ ಕ್ಷೇತ್ರದಲ್ಲಿ ತುಕಾರಾಂ ಅವರು ಬಹುಮತದಿಂದ ಗೆಲ್ಲುತ್ತಾರೆ. ಗೆದ್ದ ನಂತರ ಜಿಲ್ಲೆಯ ಹಲವಾರು ಸಮಸ್ಯೆಗಳನ್ನು ಬಗೆ ಹರಿಸಲಿದ್ದಾರೆ ಎಂದು ಸಚಿವ ಬಿ. ನಾಗೇಂದ್ರ ಅವರು ಹೇಳಿದರು.

ಕಾಂಗ್ರೆಸ್ ಅಭ್ಯರ್ಥಿ ಈ ತುಕಾರಾಂ ಅವರು ನಾಮ ಪತ್ರ ಸಲ್ಲಿಸಿದ ನಂತರ ಮಾಧ್ಯಮದೊಂದಿಗೆ ಮಾತನಾಡಿದ ಅವರು ಈ ಬಾರಿ ಕಾಂಗ್ರೆಸ್ ಅಭ್ಯರ್ಥಿ ಹೆಚ್ಚು ಮತದಿಂದ ಗೆಲ್ಲಲಿದ್ದಾರೆ. ಬಳ್ಳಾರಿ ಜನರು ಈ ಬಾರಿ ತುಕಾರಾಂ ಅವರಿಗೆ ಆಶಿರ್ವಾದ ಮಾಡಲಿದ್ದಾರೆ. ಬಿಜೆಪಿಯವರು ಕೆವಲ ಸುಳ್ಳುಗಳನ್ನ ಹೇಳಿಕೊಂಡು ದೇಶವನ್ನು ಲೂಟಿ ಮಾಡುತ್ತಿದ್ದು, ಜನರ ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಜನರಿಗೆ ಅವರು ಬಂಡವಾಳ ಗೋತ್ತಾಗಿದೆ ಹಾಗಾಗಿ ಜನರು ಕಾಂಗ್ರೆಸ್‌ಗೆ ಮತ ನೀಡಲಿದ್ದಾರೆ ಎಂದರು.

ಮೋದಿ ಸರ್ಕಾರದ ವಿರುದ್ಧ ಬಿ.ಕೆ. ಹರಿಪ್ರಸಾದ ಗುಡುಗು

(1 ನೇ ಪುಟದಿಂದ)

ಅವರು ಸಾಂವಿಧಾನಕ ಸಂಸ್ಥೆಗಳ ದುರುಪಯೋಗದ ಬಗ್ಗೆ ಕಳವಳ ವ್ಯಕ್ತಪಡಿಸಿದರು, ವಿರೋಧ ಪಕ್ಷದ ನಾಯಕರನ್ನು ಗುರಿಯಾಗಿಸಿಕೊಂಡು ಜೈಲಿಗೆ ಕಳುಹಿಸುವ ನದರ್ಶನಗಳನ್ನು ಉಲ್ಲೇಖಿಸಿ, ಮುಂಬರುವ ಚುನಾವಣೆಗಳಲ್ಲಿ ಅವರು ಭಾಗವಹಿಸುವುದನ್ನು ತಡೆಯಬಹುದು.

"ಭಾರತ್ ಜೋಡೋ" ಮತ್ತು "ನಯ್ಯ ಯಾತ್ರೆ" ಯಂತಹ ಉಪಕ್ರಮಗಳ ಮೂಲಕ ಜನರೊಂದಿಗೆ ಸಂಪರ್ಕ ಸಾಧಿಸುವಲ್ಲಿ ರಾಹುಲ್ ಗಾಂಧಿಯವರ ಪ್ರಯತ್ನಗಳನ್ನು ಎತ್ತಿ ಹಿಡಿದ ಕಾಂಗ್ರೆಸ್ ನಾಯಕರು ಎಲ್ಲರನ್ನೂ ಒಳಗೊಳ್ಳುವ ಆಡಳಿತ ಮತ್ತು ತಳಮಟ್ಟದ ತೊಡಗಿಸಿಕೊಳ್ಳುವಿಕೆಗೆ ತಮ್ಮ ಬದ್ಧತೆಯನ್ನು ಒತ್ತಿ ಹೇಳಿದರು. ಪ್ರಸ್ತುತ ಸ್ಥಿತಿಯ ಬಗ್ಗೆ ಅತೃಪ್ತಿ ವ್ಯಕ್ತಪಡಿಸಿದ ಕಾಂಗ್ರೆಸ್ ನಾಯಕರು, ಸರ್ಕಾರದಲ್ಲಿ ಬದಲಾವಣೆಯನ್ನು ಪರಿಗಣಿಸುವಂತೆ ಮತದಾರರನ್ನು ಒತ್ತಾಯಿಸಿದರು, ಹೆಚ್ಚು ಸ್ಪಂದಿಸುವ ಮತ್ತು ಜವಾಬ್ದಾರಿಯುತ ಆಡಳಿತದ ಅಗತ್ಯವನ್ನು ಒತ್ತಿ ಹೇಳಿದರು. 2024 ರ ಲೋಕಸಭೆ ಚುನಾವಣೆಗೆ ರಾಷ್ಟ್ರವು ಸಜ್ಜಾಗುತ್ತಿದ್ದಂತೆ, ರಾಜಕೀಯ ಭೂದೃಶ್ಯವು ಉತ್ಸಾಹಭರಿತ ಸ್ಪರ್ಧೆಗೆ ಸಿದ್ಧವಾಗಿದೆ, ಕಾಂಗ್ರೆಸ್ ಪಕ್ಷವು ಆಡಳಿತಾರೂಢ ಭಾರತೀಯ ಜನತಾ ಪಕ್ಷಕ್ಕೆ (ಬಿಜೆಪಿ) ವಿಶ್ವಾಸಾರ್ಹ ಪರ್ಯಾಯವಾಗಿ ತನ್ನನ್ನು ತಾನು ಸ್ಥಾಪಿಸಿಕೊಂಡಿದೆ. ಈ ಸಭೆಯು ಪ್ರಗತಿಪರ ಮತ್ತು ಅಂತರ್ಗತ ಭಾರತಕ್ಕಾಗಿ ತನ್ನ ದೃಷ್ಟಿಕೋನವನ್ನು ಪ್ರತಿಪಾದಿಸಲು ಕಾಂಗ್ರೆಸ್‌ಗೆ ವೇದಿಕೆಯಾಗಿ ಕಾರ್ಯನಿರ್ವಹಿಸಿತು, ಮುಂದೆ ಕ್ರಿಯಾತ್ಮಕ ಚುನಾವಣಾ ಪ್ರಚಾರಕ್ಕೆ ವೇದಿಕೆಯನ್ನು ಸಿದ್ಧಪಡಿಸಿತು.

ಕುಡಿಯುವ ನೀರು ಪೂರೈಕೆ ವ್ಯತ್ಯಯ ಆಗದಂತೆ ಗಮನಹರಿಸಿ: ಜಿಲ್ಲಾಧಿಕಾರಿ

(1 ನೇ ಪುಟದಿಂದ)

ತುಂಗಭದ್ರಾ ಮತ್ತು ಮಲಪ್ರಭಾ ನದಿ ಮೂಲಗಳಿಂದ ಕುಡಿಯುವ ನೀರು ಪೂರೈಕೆ, ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಕೆ, ಬೋರ್ವೆಲ್ ಮೂಲಕ ಕುಡಿಯುವ ನೀರು ಪೂರೈಕೆ ಹೀಗೆ ವಿವಿಧ ಮೂಲಗಳಿಂದ ಕುಡಿಯುವ ನೀರು ಪೂರೈಸಲಾಗುತ್ತಿದ್ದು, ಈ ಬಗ್ಗೆ ಗಮನ ಹರಿಸಬೇಕು. ಕುಡಿಯುವ ನೀರು ಸಂಗ್ರಹ ಮತ್ತಿತರ ಬಗ್ಗೆ ಅಧಿಕಾರಿಗಳ ಜತೆ ಜಿಲ್ಲಾಧಿಕಾರಿ ಅವರು ಸುದೀರ್ಘವಾಗಿ ಚರ್ಚಿಸಿದರು.

ಕುಡಿಯುವ ನೀರು ಪೂರೈಕೆ ಸ್ಥಿತಿಗತಿ ಬಗ್ಗೆ ಮಾಹಿತಿ ಪಡೆದ ಜಿಲ್ಲಾಧಿಕಾರಿ ಅವರು ಕುಡಿಯುವ ನೀರು ಸರಬರಾಜಿನಲ್ಲಿ ಸಾರ್ವಜನಕರಿಂದ ದೂರು ಬಾರದಂತೆ ಗಮನ ಹರಿಸುವುದು ಅಧಿಕಾರಿಗಳ ಪ್ರಥಮ ಆದ್ಯತೆ ಆಗಬೇಕು. ಕುಡಿಯುವ ನೀರಿನ ಪೂರೈಕೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಜಿಲ್ಲಾಧಿಕಾರಿ ಅವರು ತಾಕೀತು ಮಾಡಿದರು.

ಖಾಸಗಿ ಕೊಳವೆ ಬಾವಿಗಳ ಮೂಲಕ ಕುಡಿಯುವ ನೀರು ಪೂರೈಕೆಗೆ ಕ್ರಮ ವಹಿಸಬೇಕು. ತಾಲೂಕು ಮಟ್ಟದಲ್ಲಿ ತಹಶೀಲ್ದಾರರು, ತಾಲೂಕು ಪಂಚಾಯತ್ ಇ.ಒಗಳು, ಸ್ಥಳೀಯ ಸಂಸ್ಥೆಯ ಮುಖ್ಯಾಧಿಕಾರಿಗಳು ಹಾಗೂ ಪಿಡಿಒಗಳ ಜೊತೆ ಸಭೆ ನಡೆಸಿ ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಎಚ್ಚರ ವಹಿಸಬೇಕು. ಕುಡಿಯುವ ನೀರು ಪೂರೈಕೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಜಿಲ್ಲಾಧಿಕಾರಿ ಅವರು ಸೂಚಿಸಿದರು.

ಕುಡಿಯುವ ನೀರು ಪೂರೈಕೆಯಲ್ಲಿನ ನರ್ವಹಣೆಯನ್ನು ಸರಿಯಾಗಿ ನಭಾಯಿಸಬೇಕು. ಪೈಪ್‌ಲೈನ್‌ಗಳನ್ನು ಆಗಾಗ ಪರಿಶೀಲಿಸಬೇಕು. ಕುಡಿಯುವ ನೀರು ಪೂರೈಸುವುದರ ಜೊತೆಗೆ ಗುಣಮಟ್ಟದ ಬಗ್ಗೆಯೂ ಪ್ರತಿನಿತ್ಯ ಪರಿಶೀಲಿಸಬೇಕು. ಯಾವುದೇ ಕಾರಣಕ್ಕೂ ಉದಾಸೀನ ತೋರಬಾರದು ಎಂದು ಜಿಲ್ಲಾಧಿಕಾರಿ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು. ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಕೆ ಸಂಬಂಧ ಟ್ಯಾಂಕರ್ಗಳಿಗೆ ಕಡ್ಡಾಯವಾಗಿ ಜಿಪಿಎಸ್ ಅಳವಡಿಸಬೇಕು. ಕುಡಿಯುವ ನೀರು ಪೂರೈಕೆ ಸಂದರ್ಭದಲ್ಲಿ ಛಾಯಾಚಿತ್ರ ಸಹಿತ ಮಾಹಿತಿ ಒದಗಿಸಬೇಕು ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಜಾನುವಾರುಗಳಿಗೆ ಮೇವು ಪೂರೈಕೆಯಲ್ಲಿ ವ್ಯತ್ಯಯ ಆಗಬಾರದು. ಜಿಲ್ಲೆಯ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ಮೇವು ಪೂರೈಕೆಯನ್ನು ಸರಿಯಾಗಿ ನಭಾಯಿಸಬೇಕು ಎಂದು ಜಿಲ್ಲಾಧಿಕಾರಿ ಅವರು ಇದೇ ಸಂದರ್ಭದಲ್ಲಿ ಸೂಚಿಸಿದರು.

ಜಿ.ಪಂ.ಸಿ.ಇ.ಒ ಎಸ